## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1078 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 29.09.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ನ್ಯಾಯ ಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರಿಗೆ ವಿತರಿಸುತ್ತಿರುವ ಆಹಾರ ಧಾನ್ಯಗಳು ಯಾವುವು (ವಿವರ ನೀಡುವುದು) | ರಾಜ್ಯದ ನ್ಯಾಯಬೆಲೆ ಅಂಗಡಿಗಳಲ್ಲಿ ಅಕ್ಕಿ, ಗೋಧಿ, ಬೇಳೆ ಹಾಗೂ ಕಡಲೆಕಾಳು ಆಹಾರಧಾನ್ಯಗಳನ್ನು ವಿತರಿಸಲಾಗುತ್ತಿದೆ. |
| ಆ | ಯಾವ ಪ್ರಮಾಣದಲ್ಲಿ ಯಾವ ದರದಲ್ಲಿ ಪಡಿತರವನ್ನು ಒದಗಿಸಲಾಗುತ್ತಿದೆ; (ವಿವರ ನೀಡುವುದು) | ಅಂತ್ಯೋದಯ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿ ಹಾಗೂ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿಯಲ್ಲಿ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ 1 ಕೆ.ಜಿ ಬೇಳೆ ಅಥವಾ 1 ಕೆ.ಜಿ ಕಡಲೆಕಾಳು ಉಚಿತವಾಗಿ ಒದಗಿಸಲಾಗುತ್ತಿದೆ.<br>ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ ಪ್ರತಿ ಕಾರ್ಡ್‌ಗೆ 2 ಕೆ.ಜಿ ಗೋಧಿ ಹಾಗೂ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿಯಲ್ಲಿ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ 1 ಕೆ.ಜಿ ಬೇಳೆ ಅಥವಾ 1 ಕೆ.ಜಿ ಕಡಲೆಕಾಳು ಉಚಿತವಾಗಿ ಒದಗಿಸಲಾಗುತ್ತಿದೆ.<br>ಆದ್ಯತೇತರ ಪಡಿತರ ಚೀಟಿಗೆ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ ಹಾಗೂ ಒಂದಕ್ಕಿಂತ ಹೆಚ್ಚಿನ ಸದಸ್ಯರಿದ್ದರೆ 10 ಕೆ.ಜಿ ಅಕ್ಕಿಯನ್ನು ಒದಗಿಸಲಾಗುತ್ತಿದೆ. ಇದಕ್ಕೆ ಪ್ರತಿ 1 ಕೆ.ಜಿ ಅಕ್ಕಿಗೆ ರೂ.15/- ದರ ನಿಗದಿ ಪಡಿಸಲಾಗಿದೆ. |
| ಇ | ಬೀದರ್ ಜಿಲ್ಲೆಯಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್ ದಾರರ ಸಂಖ್ಯೆ ಎಷ್ಟು? | ಬೀದರ ಜಿಲ್ಲೆಯಲ್ಲಿ 310521 ಆದ್ಯತಾ ಪಡಿತರ ಚೀಟಿಗಳು (ಬಿ.ಪಿ.ಎಲ್) ಹಾಗೂ 41774 ಆದ್ಯತೇತರ (ಎ.ಪಿ.ಎಲ್) ಪಡಿತರ ಚೀಟಿಗಳು ಇರುತ್ತವೆ. |

**ಆನಾಸ 270 ಡಿಆರ್‌ಎ 2020 (ಇ-ಆಫೀಸ್)**

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.